# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ವಾರ್ಡ್ –144ರ ವಾರ್ಡ್ ಸಭೆಯ ನಡವಳಿ

ಚಿಕ್ಕಪೇಟೆ ವಿಧಾನಸಭಾ ಕ್ಷೇತ್ರದ ಸಿದ್ದಾಪುರ ವಾರ್ಡ್–144 ರಲ್ಲಿ ವಾರ್ಡ್ ಸಭೆಯನ್ನು ಮಾನ್ಯ ಶ್ರೀ. ನರಸಾರಾಮ್‌ರಾವ್, ಅಧೀಕ್ಷಕ ಅಭಿಯಂತರರು (ದಕ್ಷಿಣ), ನೋಡಲ್ ಅಧಿಕಾರಿ ಹಾಗೂ ವಾರ್ಡ್ ಸಮಿತಿ ಅಧ್ಯಕ್ಷರ ಅಪ್ಪಣೆ ಮೇರೆಗೆ ದಿನಾಂಕ:23/07/2021 ರಂದು ಶುಕ್ರವಾರ ಬೆಳಗ್ಗೆ 11.00 ಗಂಟೆಗೆ ವಾರ್ಡ್ ಕಮಿಟಿ ಸಭೆಯನ್ನು ಕರೆಯಲಾಗಿದ್ದು, ವಾರ್ಡ್ ಕುಂದು ಕೊರತೆಗಳ ಬಗ್ಗೆ ಚರ್ಚಿಸಲು ಅಧಿಕಾರಿಗಳಿಗೆ ಹಾಗೂ ಸಾರ್ವಜನಿಕರಿಗೆ ಆಹ್ವಾನ ನೀಡಿದ್ದು, ಸಭೆಗೆ ಹಾಜರಾಗಿರುವ ಎಲ್ಲರಿಗೂ ಸ್ವಾಗತ ಕೋರುತ್ತಾ, ಸಭೆಯ ವಾರ್ಡ್ ಸಮಿತಿ ಅಧ್ಯಕ್ಷರವರ ಅಧ್ಯಕ್ಷತೆಯೊಂದಿಗೆ ಸಭೆಯನ್ನು ನಡೆಸಲಾಯಿತು.

**ಹಾಜರಿದ್ದವರು:–**

1. ಅಧೀಕ್ಷಕ ಅಭಿಯಂತರರು (ದಕ್ಷಿಣ) ಹಾಗೂ ವಾರ್ಡ್ 144ರ ನೋಡಲ್ ಅಧಿಕಾರಿ.
2. ಸಹಾಯಕ ಅಭಿಯಂತರರು, ವಾರ್ಡ್–144.
3. ವೈದ್ಯಾಧಿಕಾರಿಗಳು, ಸಿದ್ದಾಪುರ.
4. ಸಹಾಯಕ ಅಭಿಯಂತರರು (ವಿದ್ಯುತ್–ದಕ್ಷಿಣ).
5. ಹಾಗೂ ಸಾರ್ವಜನಿಕರು.

*********

1. ಶ್ರೀ. ರಿಯಾಜ್ ರವರು ಮಾತನಾಡಿ ನಿಮ್ಹಾನ್ಸ್ ಕಾಂಪೌಂಡ್‌ನಲ್ಲಿ ಹಾಕಿರುವ ಹಸಿ ತ್ಯಾಜ್ಯದ ಕಸದಿಂದ ಸುತ್ತ ಮುತ್ತ ವಾಸಿಸುವ ಸಾರ್ವಜನಿಕರಿಗೆ ದುರ್ವಾಸನೆ ಬರುತ್ತಿದ್ದು, ಆರೋಗ್ಯದ ಮೇಲೆ ತೊಂದರೆಯಾಗಿದೆ ಎಂದು ಇದರ ಬಗ್ಗೆ ಕ್ರಮ ತೆಗೆದುಕೊಳ್ಳಲು ಮಾನ್ಯ ಅಧ್ಯಕ್ಷರಿಗೆ ಕೋರಿರುವ ಹಿನ್ನೆಲೆಯಲ್ಲಿ ಸದರಿಯವರಿಗೆ ನೋಟಿಸ್ ಜಾರಿ ಮಾಡಿ ಹಸಿ ತ್ಯಾಜ್ಯವನ್ನು ತೆರವುಗೊಳಿಸಲು ಕ್ರಮ ವಹಿಸುವಂತೆ ಮತ್ತೊಮ್ಮೆ ಸಂಬಂಧಪಟ್ಟ ಇಲಾಖೆಯವರಿಗೆ ನಿರ್ದೇಶನ ನೀಡುವುದಾಗಿ ಸಭೆಯಲ್ಲಿ ತಿಳಿಸಿದರು.

2. ಶ್ರೀ. ಅಶೋಕ್ ರವರು ಮಾತನಾಡಿ ವಾರ್ಡ್ ಪ್ರದೇಶದಲ್ಲಿ ಸಾಕಷ್ಟು ಬೀದಿ ದೀಪಗಳು ಹಾಳಾಗಿದ್ದು, ಸರಿಪಡಿಸಲು ಹಿಂದಿನ ಸಭೆಯಲ್ಲಿ ಕೋರಿದರು ಈ ವಿಷಯವಾಗಿ ಅಧ್ಯಕ್ಷರು ಮಾತನಾಡಿ ವಿದ್ಯುತ್ (ದಕ್ಷಿಣ) ರವರ ಇಲಾಖೆಯಿಂದ ಈ ಬಗ್ಗೆ ಕ್ರಮ ವಹಿಸಲಾಗಿದೆ ಎಂದು ಸಭೆಗೆ ತಿಳಿಸಿದರು.



Scanned with CamScanner

3. ಶ್ರೀ. ಅಶೋಕ್ ರವರು ಮಾತನಾಡಿ ಮಹಾಬೋಧಿಗೆ ಗುತ್ತಿಗೆ ನೀಡಿರುವ (ಮಲ್ಲಿಗೆ ಆಸ್ಪತ್ರೆ) ಕಟ್ಟಡದಲ್ಲಿ ಯಾವ ಉದ್ದೇಶಕ್ಕೆ ಗುತ್ತಿಗೆ ನೀಡಲಾಗಿದೆಯೋ ಅದರ ವ್ಯತಿರಿಕ್ತವಾಗಿ ಕಟ್ಟಡ ಬಳಕೆಯಾಗುತ್ತಿದೆ ಎಂದು ಪ್ರಶ್ನಿಸಿದ್ದರು. ಈ ವಿಷಯವಾಗಿ ಮಹಾಬೋಧಿ ಅಧ್ಯಕ್ಷರಿಗೆ ನೋಟಿಸ್ ಜಾರಿ ಮಾಡುವಂತೆ ಮತ್ತೊಮ್ಮೆ ಕಂದಾಯ ಅಧಿಕಾರಿಯವರಿಗೆ ಅಧ್ಯಕ್ಷರು ತಿಳಿಸಿದರು.

4. ವಾರ್ಡಿನ ಸಾರ್ವಜನಿಕರು ಮಾತನಾಡಿ ವಾರ್ಡ್ ಪ್ರದೇಶದ ರಸ್ತೆಗಳಲ್ಲಿ ದಿನನಿತ್ಯದ ವ್ಯಾಪಾರಕ್ಕಾಗಿ ಪಾದಚಾರಿ ಮಾರ್ಗವನ್ನು ಬಳಸುತ್ತಿದ್ದು, ವಾಹನಗಳ ಸಂಚಾರಕ್ಕೆ ತೊಂದರೆಯಾಗಿದೆ ಎಂದು ತಿಳಿಸಿದರು. ಅಧ್ಯಕ್ಷರು ಮಾತನಾಡಿ ವಾರ್ಡ್ ಪ್ರದೇಶದಲ್ಲಿ ಈ ರೀತಿ ಪಾದಚಾರಿ ಮಾರ್ಗವನ್ನು ಬಳಸುತ್ತಿರುವ ರಸ್ತೆಗಳ ವಿವರಗಳನ್ನು ಕಲೆಹಾಕಿ ನೀಡುವಂತೆ ವಾರ್ಡಿನ ಅಭಿಯಂತರರಿಗೆ ಸೂಚಿಸಿದ್ದರು. ಈ ಬಗ್ಗೆ ವಾರ್ಡಿನ ಅಭಿಯಂತರರು ಮಾತನಾಡಿ ವಾರ್ಡ್ ಪ್ರದೇಶದ ರಸ್ತೆಗಳಲ್ಲಿ ಪಾದಚಾರಿ ಮಾರ್ಗವನ್ನು ಅತಿಕ್ರಮಿಸಿರುವವರ ವಿವರಗಳನ್ನು ಕೂಡಲೇ ನೀಡುವುದಾಗಿ ಸಭೆಗೆ ತಿಳಿಸಿದರು.

ಮೇಲಿನ ಈ ಎಲ್ಲಾ ಚಟುವಟಿಕೆಗಳನ್ನು ಕ್ರಮಬದ್ಧವಾಗಿ ನಿರ್ವಹಿಸಲು ಎಲ್ಲಾ ಸಿಬ್ಬಂದಿ ವರ್ಗದವರು ಒಂದುಗೂಡಿ ಈ ಕಾರ್ಯದಲ್ಲಿ ಪಾಲ್ಗೊಂಡು ಮಾನ್ಯ ಆಯುಕ್ತರು (ಬಿಬಿಎಂಪಿ) ರವರು ವಹಿಸಿರುವ ಜವಾಬ್ದಾರಿಯನ್ನು ಯಶಸ್ವಿಯಾಗಿ ನಿರ್ವಹಿಸಲು ಎಲ್ಲರೂ ಸಹಕರಿಸಬೇಕೆಂದು ಹೇಳುತ್ತಾ ಸಭೆ ಮುಕ್ತಾಯಗೊಳಿಸಿದರು.

23/7/24

ಕಾರ್ಯದರ್ಶಿ & ಸಹಾಯಕ ಅಭಿಯಂತರರು
ವಾರ್ಡ್ ಸಂಖ್ಯೆ - 144
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

23/7

ಅಧ್ಯಕ್ಷರು & ನೋಡಲ್ ಅಧಿಕಾರಿ
ವಾರ್ಡ್ ಸಂಖ್ಯೆ - 144
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ



Scanned with CamScanner